ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 741
ಸದಸ್ಯರ ಹೆಸರು : ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ
ಉತ್ತರಿಸುವ ಸಚಿವರು : ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು
ಉತ್ತರಿಸುವ ದಿನಾಂಕ : 10.03.2020.

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ಲಕ್ಷಾಂತರ ಅಡಿಕೆ ಬೆಳೆಗಾರರು ಬಹುಕಾಲದಿಂದ ನಿರೀಕ್ಷಿಸುತ್ತಿರುವ ಅಡಿಕೆ ಮಂಡಳಿ ಸ್ಥಾಪನೆ ಮಾಡುವ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ;	ರಾಷ್ಟ್ರ ಮಟ್ಟದ ಅಡಿಕೆ ಮಂಡಳಿ ಸ್ಥಾಪಿಸಲು ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ.
ಆ)	ಅಡಿಕೆ ಪವಿತ್ರ ಎನ್ನುವ ಭಾವನೆ ಜನತೆಯಲ್ಲಿದ್ದರೂ, ಅಡಿಕೆ ಆರೋಗ್ಯಕ್ಕೆ ಹಾನಿಕರ ಎಂಬ ಅವೈಜ್ಞಾನಿಕ ವರದಿಯನ್ನು ಕೈಬಿಡುವ ನಿಟ್ಟಿನಲ್ಲಿ ಸರ್ಕಾರದ ಕ್ರಮವೇನು;	ಈ ನಿಟ್ಟಿನಲ್ಲಿ ಅಡಿಕೆ ಬೆಳೆಗಾರರ ಹಿತ ದೃಷ್ಠಿಯನ್ನು ಕಾಪಾಡಲು ರಾಜ್ಯ ಸರ್ಕಾರದ ವತಿಯಿಂದ ಅಡಿಕೆ ಕಾರ್ಯ ಪಡೆಯನ್ನು (Areca Task Force) ರಚಿಸಲಾಗಿದೆ, ಅಡಿಕೆ ಆರೋಗ್ಯಕ್ಕೆ ಹಾನಿಕರ ಎಂಬ ಅವೈಜ್ಞಾನಿಕ ವರದಿಯನ್ನು ಕೈಬಿಡುವ ಸಂಬಂಧ ವೈದ್ಯಕೀಯ ವರದಿಗಳನ್ನು ಪಡೆಯಲು ಕ್ರಮ ಕೈಗೊಳ್ಳಲಾಗುತ್ತಿದೆ.
ಇ)	ಅಡಿಕೆಗೆ ಬರುವ ಕೊಳೆ, ಹಳದಿ ಎಲೆ ರೋಗಗಳ ನಿಯಂತ್ರಣಕ್ಕೆ ಸರ್ಕಾರ ಯಾವ ರೀತಿ ಕ್ರಮ ಕೈಗೊಂಡಿದೆ;	**ಅಡಿಕೆಗೆ ಬರುವ ಕೊಳೆ, ಹಳದಿ ಎಲೆ ರೋಗಗಳ ನಿಯಂತ್ರಣಕ್ಕೆ ಕೆಳಕಾಣಿಸಿದ ಕ್ರಮಗಳನ್ನು ಕೈಗೊಳ್ಳಲಾಗಿದೆ.** **1.** ಕೊಳೆರೋಗ ನಿಯಂತ್ರಣ • ರೋಗ ಹರಡುವ ಶಿಲೀಂಧ್ರದ ನಿಯಂತ್ರಣಕ್ಕೆ ಬೋರ್ಡೋ ದ್ರಾವಣ ತಯಾರಿಸಲು ಅಗತ್ಯವಿರುವ ಮೈಲು ತುತ್ತಾ ಹಾಗೂ ಸುಣ್ಣ ಖರೀದಿಸಲು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರಷ್ಟು ಮತ್ತು ಸಾಮಾನ್ಯ ವರ್ಗದವರಿಗೆ ಶೇ. 75 ರಷ್ಟು ಸಹಾಯ ಧನವನ್ನು ನೀಡಲಾಗುತ್ತಿದೆ. • ರೋಗ ನಿಯಂತ್ರಣಕ್ಕೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ರೈತರಿಗೆ ತಾಂತ್ರಿಕ ಮಾಹಿತಿಯನ್ನು ಸಭೆಗಳು, ತರಬೇತಿಗಳು, ಪ್ರಾತ್ಯಕ್ಷತೆಗಳು ಹಾಗೂ ಕರಪತ್ರಗಳನ್ನು ಹಂಚುವ ಮೂಲಕ ಹೋಬಳಿ ಮಟ್ಟದಲ್ಲಿ ನೀಡಲಾಗುತ್ತಿದೆ. • NDRF ಮಾರ್ಗಸೂಚಿಯನ್ವಯ

		ತೋಟಗಾರಿಕೆ ಬಹುವಾರ್ಷಿಕ ಬೆಳೆ ಹಾನಿಗೆ ಪ್ರತಿ ಹೆಕ್ಟೇರಗೆ ರೂ.18,000/-ನಂತೆ, ಪ್ರತಿ ಫಲಾನುಭವಿಗೆ ಗರಿಷ್ಠ 2 ಹೆಕ್ಟೇರ್ ವರೆಗೆ ಪರಿಹಾರ ಧನವನ್ನು ಒದಗಿಸಲು ಕಂದಾಯ ಇಲಾಖೆಯಿಂದ ಕ್ರಮ ವಹಿಸಲಾಗುತ್ತಿದೆ. 2. **ಅಡಿಕೆ ಹಳದಿ ಎಲೆ ರೋಗ** • ಗಿಡಗಳ ರೋಗ ನಿರೋಧಕ ಶಕ್ತಿಯನ್ನು ವೃದ್ಧಿಸಲು ಹನಿ ನೀರಾವರಿ ಅಳವಡಿಕೆ, ಉತ್ತಮ ಬಸಿಕಾಲುವೆ ನಿರ್ಮಾಣ, ಪೌಷ್ಠಿಕಾಂಶಗಳ ಸರಬರಾಜು ಇತ್ಯಾದಿ ಉತ್ತಮ ಬೇಸಾಯ ಪದ್ಧತಿಗಳನ್ನು ಪ್ರಚಾರ ಮಾಡಲಾಗುತ್ತಿದೆ. • ಅಡಿಕೆ ಹಳದಿ ಎಲೆ ರೋಗ ಬಾಧೆ ತೀವ್ರವಾಗಿರುವ ತೋಟಗಳಲ್ಲಿ ಬಾಧಿತ ಮರಗಳನ್ನು ತೆಗೆದು ಹಾಕಿ ಪರ್ಯಾಯ ಬೆಳೆಗಳಾದ ಬಾಳೆ, ಕಾಳುಮೆಣಸು, ಏಲಕ್ಕಿ, ಕೋಕೋ, ತೆಂಗು, ತಾಳೆ ಬೆಳೆ ಮತ್ತು ಕಾಫಿ ಬೆಳೆಗಳನ್ನು ಬೆಳೆಸಲು ರೈತರಿಗೆ ತಿಳುವಳಿಕೆ ನೀಡಲಾಗುತ್ತಿದೆ.
ಈ)	ಕಳ್ಳ ಸಾಗಾಣಿಕೆ ಮೂಲಕ ವಿದೇಶಿ ಅಡಿಕೆ ಮಾರುಕಟ್ಟೆ ಪ್ರವೇಶಿಸುವುದನ್ನು ತಡೆಯಲು ಸರ್ಕಾರದ ಕ್ರಮವೇನು;	ಕಳ್ಳ ಸಾಗಾಣಿಕೆ ಮೂಲಕ ವಿದೇಶಿ ಅಡಿಕೆ ಮಾರುಕಟ್ಟೆ ಪ್ರವೇಶಿಸುವುದನ್ನು ತಡೆಯಲು ಕೇಂದ್ರ ಸರ್ಕಾರವನ್ನು ಒತ್ತಾಯಿಸಲಾಗುವುದು.
ಉ)	ಅಡಿಕೆ ದರ ಸ್ಥಿರತೆ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಸರ್ಕಾರದ ಕ್ರಮವೇನು?	ಅಡಿಕೆ ದರ ಸ್ಥಿರತೆ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಬೆಲೆ ಕುಸಿತವಾದ ಸಂದರ್ಭದಲ್ಲಿ ಮಾರುಕಟ್ಟೆ ಮಧ್ಯಪ್ರವೇಶ ಬೆಲೆಯನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಗಳನ್ವಯ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ.

HORTI 82 HGM 2020

(ನಾರಾಯಣ ಗೌಡ)
ಪೌರಾಡಳಿತ, ತೋಟಗಾರಿಕೆ ಮತ್ತು ರೇಷ್ಮೆ ಸಚಿವರು